CC 841/2009

ಒಂದನೇ ಅಪರ ಸಿವಿಲ್ ಜಡ್ಜ್ ಮತ್ತು ಜೆಎಂಎಫ್ ಸಿ ರವರ ನ್ಯಾಯಾಲಯ, ಕನಕಪುರ

**ಸಿ.ಸಿ. 841/2009**

ಪಿರ್ಯಾದುದಾರರು : ಕೋಡಿಹಳ್ಳಿ ಪೊಲೀಸ್ ಠಾಣೆ

– ವಿರುದ್ಧ –

ಆರೋಪಿತರಾದ : ಸಮೀ ಬಿನ್ ಖಾಸಿಂ ಖಾನ್
50 ವರ್ಷ, ಹಲಗೂರು
ಮಳವಳ್ಳಿ ತಾಲ್ಲೂಕು

:: **ದೋಷಾರೋಪಣೆ** ::

**ಶ್ರೀಮತಿ. ಲತಾಶ್ರೀ ಬಿ.ವಿ., ಬಿ.ಎ.ಎಲ್.,ಎಲ್.ಬಿ ಒಂದನೇ ಅಪರ ನ್ಯಾಯಿಕ ದಂಡಾಧಿಕಾರಿಗಳು, ಕನಕಪುರ, ಆದ ನಾನು ನಿಮ್ಮ ಮೇಲೆ ದೋಷಾರೋಪಣೆ ಏನೆಂದರೆ:-**

ದಿನಾಂಕ 01.01.2009 ರಂದು ರಾತ್ರಿ 8 ಗಂಟೆ ಸಮಯದಲ್ಲಿ ಘನ ನ್ಯಾಯಾಲಯದ ವ್ಯಾಪ್ತಿ ಕೋಡಿಹಳ್ಳಿ ಠಾಣಾ ಸರಹದ್ದು ಹೊಸದುರ್ಗ ಗ್ರಾಮದ ಶ್ರೀರಾಮ ದೇವರ ದೇವಸ್ಥಾನದ ಬಳಿ ಚಾಸಾ-7 ಎನ್ ವೆಂಕಟೇಶ್ ರವರು ಗಸ್ತಿನಲ್ಲಿರುವಾಗ ಆರೋಪಿಯಾದ ನೀವು ಕೆಎ-11-ಬಿ-2349 ಲಾರಿಯ ಚಾಲಕನಾಗಿ ಲಾರಿಯಲ್ಲಿ ಅಕ್ರಮವಾಗಿ 8 ಕೊರೆ ಅಕ್ಕಿಯನ್ನು ಹುಣಸನಹಳ್ಳಿ ಕಡೆಯಿಂದ ನಿಮ್ಮ ಲಾರಿಯಲ್ಲಿ ಹಾಕಿಕೊಂಡು ಹೆಚ್ಚಿನ ಬೆಲೆಗೆ ಮಾರಾಟ ಮಾಡಲು ಹಲಗೂರಿಗೆ ಹೋಗುತ್ತಿದ್ದು, ಅಕ್ಕಿ ಮೂಟೆಗಳನ್ನು ಸಾಗಾಣಿಕೆ ಮಾಡಲು ಹಾಗೂ ಅಕ್ಕಿಯ ಬಗ್ಗೆ ಯಾವುದೇ ಬಿಲ್ಲು ವಗೈರೆ ಇಲ್ಲದೆ ಸರ್ಕಾರಕ್ಕೆ ಮೋಸ ಮಾಡಿ ಹೆಚ್ಚಿನ ಬೆಲೆಗೆ ಮಾರಾಟ ಮಾಡಲು 8 ಕೊರೆ ಅಂದರೆ 320 ಕೆಜಿಯನ್ನು ಅಕ್ರಮವಾಗಿ ಸಾಗಾಣಿಕೆ ಮಾಡಿದ್ದು ಸದರಿ ನಿಮ್ಮ ಕೃತ್ಯವು 3 ಮತ್ತು 7 ಇ ಸಿ ಕಾಯ್ದೆ ಅಡಿ ಶಿಕ್ಷಾರ್ಹ ಅಪರಾಧ ಮಾಡಿರುವಿರಿ.

ಸದರಿ ಅಪರಾಧಗಳು ಈ ನ್ಯಾಯಾಲಯದ ಸಂಜ್ಞೆಯಲ್ಲಿ ಬರುತ್ತವೆ ಮತ್ತು ಸದರೀ ವಿಚಾರಣೆಯು ನನ್ನ ಸಮಕ್ಷಮ ನಡೆಯಬೇಕೆಂದು ಈ ಮೂಲಕ ನಿರ್ದೇಶಿಸುತ್ತೇನೆ.

(ಈ ಆರೋಪಣೆಯನ್ನು ಈ ದಿನ ದಿನಾಂಕ:13-10-2025 ರಂದು ಆರೋಪಿತರಿಗೆ ಕನ್ನಡ ಭಾಷೆಯಲ್ಲಿ ಓದಿ ಹೇಳಿ ಆವರ ಉತ್ತರಗಳನ್ನು ಯಥಾವತ್ತಾಗಿ ದಾಖಲಿಸಿದೆ)

ಓ. ಹೇ. ಕೇ. ಸರಿ ಇದೆ.

ಒಂದನೇ ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್ ಸಿ ಕನಕಪುರ

CC 841/2009

**ಆರೋಪಿಯ ಹೇಳಿಕೆ**

ಪ್ರಶ್ನೆ-1 ಇದೀಗ ಓದಿ ಹೇಳಿದ ದೋಷಾರೋಪಣೆ ನಿಮಗೆ ಅರ್ಥವಾಯಿತೇ?

ಉತ್ತರಃ-

ಪ್ರಶ್ನೆ-2 ನೀವು ನಿಮ್ಮ ತಪ್ಪನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬಯಸುವಿರಾ?

ಉತ್ತರಃ-

(ದಿನಾಂಕಃ 13-10-2025 ರಂದು ತೆರೆದ ನ್ಯಾಯಾಲಯದಲ್ಲಿ ಆರೋಪಿಗೆ ತಿಳಿಯುವ ಭಾಷೆಯಲ್ಲಿ ಆರೋಪವನ್ನು ಓದಿ, ತಿಳಿಸಿ ಹೇಳಿ, ಕೇಳಿ ಉತ್ತರವನ್ನು ಪಡೆಯಲಾಗಿದೆ ಎಂದು ಈ ಮೂಲಕ ದೃಢೀಕರಿಸಿದೆ.)

**ಮೊದಲನೇ ಅಪರ ಸಿಜೆ ಮತ್ತು ಜೆಎಂಎಫ್‌ಸಿ**
**ನ್ಯಾಯಾಲಯ, ಕನಕಪುರ**

**ಆರೋಪಿಯ ಸಹಿ :**